# 2021-22ನೇ ಸಾಲಿನ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯದ ಪ್ರಮುಖ ಅಂಶಗಳು

------------------------------------------------

ಕೋವಿಡ್-19 ಸಂಕಷ್ಟದ ಸಂದರ್ಭದಲ್ಲೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಮಗ್ರ ಅಭಿವೃದ್ಧಿಗಾಗಿ ಎಲ್ಲಾ ವರ್ಗಗಳ ಹಿತ ಕಾಪಾಡುವಂತಹ ಜನ ಸ್ನೇಹಿ ಬಜೆಟ್ ಅನ್ನು ಮಂಡಿಸಿದ್ದಾರೆ.

ಪ್ರಸಕ್ತ ಸಾಲಿನ ಆಯವ್ಯಯದ ಒಟ್ಟು ಗಾತ್ರ: ರೂ. 9291.33 ಕೋಟಿಗಳು

- ಯಾರಿಗೂ ಹೊರೆಯಾಗದ **"ಜನಸ್ನೇಹಿ ಬಜೆಟ್"** ಇದಾಗಿದೆ.
  **ಯಾವುದೇ ತೆರಿಗೆ ಹೆಚ್ಚಳ ಇಲ್ಲ ಮತ್ತು ಹೊಸ ತೆರಿಗೆ ಪ್ರಸ್ತಾಪವೂ ಇಲ್ಲ**
- ಆಯವ್ಯಯದಲ್ಲಿ ಎಲ್ಲಾ ವರ್ಗಗಳಿಗೆ, ವಲಯಗಳಿಗೆ ಹಾಗೂ ವಾರ್ಡ್‌ಗಳಿಗೆ ಪ್ರಾಮುಖ್ಯತೆ ನೀಡುವ ಮೂಲಕ ಸಮತೋಲನ ಕಾಯ್ದುಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ.
- ಬಿ.ಬಿ.ಎಂ.ಪಿ.ಕಾಯಿದೆ-2020ನ್ನು ಸರ್ಕಾರವು ಜಾರಿಗೆ ತಂದಿದ್ದು, ಪಾಲಿಕೆಯ ವಲಯಗಳು, ವಿಧಾನಸಭಾ ಕ್ಷೇತ್ರಗಳು ಮತ್ತು ವಾರ್ಡ್‌ಗಳಿಗೆ ಆರ್ಥಿಕ ಮತ್ತು ಆಡಳಿತಾತ್ಮಕ ಅಧಿಕಾರಗಳ ವಿಕೇಂದ್ರಿಕರಣಕ್ಕೆ ಆಯಾಮ ಒದಗಿಸಿದ್ದು, ಪ್ರಸಕ್ತ ಸಾಲಿನಲ್ಲಿ ಸುಮಾರು ರೂ.2000 ಕೋಟಿ ಅನುದಾನವನ್ನು ವಲಯಗಳಿಗೆ ಹಂಚಿಕೆ ಮಾಡಲಾಗಿದೆ.
- ಆಸ್ತಿ ತೆರಿಗೆ ಸಂಗ್ರಹದಲ್ಲಿ ನಾಗರಿಕರ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸಲು ವಾರ್ಡ್‌ಗಳಲ್ಲಿ ಸಂಗ್ರಹಿಸಿದ ಆಸ್ತಿ ತೆರಿಗೆಯ ಶೇ.1 ರಷ್ಟು ಅನುದಾನವನ್ನು ವಾರ್ಡ್ ಸಮಿತಿಗೆ ಅಗತ್ಯ ಕೆಲಸಗಳನ್ನು ನಿರ್ವಹಿಸುವ ಸಲುವಾಗಿ ನೀಡಲು ಉದ್ದೇಶಿಸಲಾಗಿದೆ.
- ಈ ಆರ್ಥಿಕ ಸಾಲಿನಲ್ಲಿ, ಇ-ಆಸ್ತಿ ತಂತ್ರಾಂಶವನ್ನು ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಾ ಆಸ್ತಿಗಳಿಗೆ ಜಾರಿಗೆ ತರಲು ಉದ್ದೇಶಿಸಲಾಗಿದೆ.
- ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 'ಎ' ಮತ್ತು 'ಬಿ' ಖಾತೆಗಳ ಗೊಂದಲಗಳಿದ್ದು, ಇದನ್ನು ತೊಡೆದು ಹಾಕಲು ಸರ್ಕಾರದ ಕಂದಾಯ ಇಲಾಖೆಯ ಸಹಕಾರದೊಂದಿಗೆ "ಬಿ" ವಹಿಯಲ್ಲಿ ಆಸ್ತಿಗಳ ದಾಖಲಿಸುವ ಪದ್ಧತಿಯನ್ನು ರದ್ದುಗೊಳಿಸಿ, 'ಎ' ಖಾತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ ಇದರಿಂದ ಹೊಸ ವಲಯಗಳ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ.

- ಪಾಲಿಕೆಯ ಆರ್ಥಿಕ ನಿರ್ವಹಣೆ ಬಗ್ಗೆ ಇಕ್ರಾ (ICRA) ಸಂಸ್ಥೆಯು ಎ+ ಕ್ರೆಡಿಟ್ ರೇಟಿಂಗ್ ನೀಡಿದ್ದು, ಈ ರೇಟಿಂಗ್‌ನ್ನು ಉಳಿಸಿಕೊಂಡು, ಆರ್ಥಿಕ ಶಿಸ್ತು ಮತ್ತು ಲೆಕ್ಕಪತ್ರ ನಿರ್ವಹಣಾ ವ್ಯವಸ್ಥೆಯಲ್ಲಿ ಹೆಚ್ಚಿನ ಸುಧಾರಣೆ ತರುವುದರೊಂದಿಗೆ ಭವಿಷ್ಯದಲ್ಲಿ ಮುನಿಸಿಪಲ್ ಬಾಂಡ್‌ಗಳ ಮೂಲಕ ಪಾಲಿಕೆಯು ಹಣಕಾಸು ಮಾರುಕಟ್ಟೆಯಿಂದ ನಿಧಿಯನ್ನು ಸಂಗ್ರಹಿಸಬಹುದಾಗಿರುತ್ತದೆ.
- ಪಾಲಿಕೆಯಲ್ಲಿ ಲೆಕ್ಕ ಪತ್ರ ವಿಭಾಗದಲ್ಲಿ ಆರ್ಥಿಕ ಶಿಸ್ತನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ, ಹೊಸದಾಗಿ ಮುನಿಸಿಪಲ್ ಅಕೌಂಟಿಂಗ್ ಮ್ಯಾನುಯಲ್ ಪದ್ಧತಿಯನ್ನು ಅಳವಡಿಸಿಕೊಳ್ಳಲಾಗುತ್ತಿದೆ.
- ಎಲ್ಲಾ ರೀತಿಯ ಕಾಮಗಾರಿಗಳನ್ನು ತಾಂತ್ರಿಕ ಜಾಗೃತ ಕೋಶದ ಮೂಲಕ ಸ್ಥಳ ಪರಿಶೀಲನೆ ಕೈಗೊಳ್ಳಲಾಗುವುದು.
- ಪಾಲಿಕೆಯಲ್ಲಿ ಆಂತರಿಕ ಲೆಕ್ಕ ಪರಿಶೋಧನ ಕೋಶ ಇಲ್ಲದೇ ಇರುವುದರಿಂದ ವಾರ್ಷಿಕ ಲೆಕ್ಕ ಪರಿಶೋಧನೆಯಲ್ಲಿ ಸಾಕಷ್ಟು ಆಕ್ಷೇಪಣೆ ಬರುತ್ತಿದ್ದು, ಇವುಗಳನ್ನು ತಡೆಗಟ್ಟುವ ಉದ್ದೇಶದಿಂದ ಹೊಸದಾಗಿ ಆಂತರಿಕ ಲೆಕ್ಕ ಪರಿಶೋಧನ ವಿಭಾಗವನ್ನು ಸೃಜಿಸಲಾಗುತ್ತಿದೆ, ಸಿಬ್ಬಂದಿಗಳಿಗೆ ಮಹಾಲೇಖಪಾಲಕರು, ಕರ್ನಾಟಕ ಕಛೇರಿ ಸಿಬ್ಬಂದಿಯಿಂದ ತರಬೇತಿ ನೀಡಲಾಗುವುದು.
- ಪಾಲಿಕೆ ನಿಧಿಯಿಂದ ಕೈಗೊಳ್ಳಲಾದ ಅಂದಾಜು ರೂ.10,000 ಕೋಟಿ ಕಾಮಗಾರಿ ವಿವರಗಳನ್ನು ನಾವು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಿದ್ದೇವೆ. ಸಾರ್ವಜನಿಕರ ಬೇಡಿಕೆಯ ಮೇರೆಗೆ, ಕೆಲಸವನ್ನು ಅನುಷ್ಠಾನಗೊಳಿಸುವ ಸಂದರ್ಭದಲ್ಲೇ ಕೆಲಸದ ಬಗ್ಗೆ ಪೂರ್ಣ ಮಾಹಿತಿ ಅಂತರ್ಜಾಲದಲ್ಲಿ ಸಾರ್ವಜನಿಕರಿಗೆ ಲಭ್ಯವಾಗಲಿದೆ.
- ಈ ವರ್ಷದಲ್ಲಿ ಮಾರುಕಟ್ಟೆ ಕಟ್ಟಡಗಳ ಬಾಡಿಗೆ ವಸೂಲಿಯನ್ನು ಸಂಪೂರ್ಣವಾಗಿ ಸಂಗ್ರಹಿಸುವುದು ನಮ್ಮ ಗುರಿಯಾಗಿದ್ದು, ಪಾಲಿಕೆಯ ಮಾರುಕಟ್ಟೆಗಳಿಂದ ಒಟ್ಟಾರೆ ರೂ.38 ಕೋಟಿ ಆದಾಯವನ್ನು ನಿರೀಕ್ಷಿಸಲಾಗಿದೆ. ಬಾಡಿಗೆ ಹೆಚ್ಚಿಸುವ ಪ್ರಸ್ತಾವನೆಗಳು ಕಾನೂನು ಪ್ರಕರಣಗಳಲ್ಲಿ ಸಿಲುಕಿಕೊಂಡಿರುವುದರಿಂದ ಬಾಡಿಗೆ ಪರಿಷ್ಕರಿಸುವ ಸಲುವಾಗಿ ಬಾಡಿಗೆದಾರರೊಡನೆ ಮಧ್ಯಸ್ಥಿಕೆಗಾಗಿ ಯೋಜನೆಯನ್ನು ರೂಪಿಸಲು ಉದ್ದೇಶಿಸಲಾಗಿದೆ
- ಕಟ್ಟಡ ಪರವಾನಗಿಯಿಂದ ವಾಸ ದೃಢೀಕರಣ ಪ್ರಮಾಣ ಪತ್ರ ಪಡೆಯುವ ವರೆವಿಗೂ ಈಸ್ ಆಫ್ ಡೂಯಿಂಗ್ ಬಿಸಿನೆಸ್ [Ease of doing Business] ರೂಪುರೇಷೆಗಳ ಅಡಿಯಲ್ಲಿ ಹೊಸದಾಗಿ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು ಸರಳ ರೀತಿಯಲ್ಲಿ ಒಂದೇ ಅರ್ಜಿ ಸಲ್ಲಿಸಿ ಏಕೀಕೃತ ತಂತ್ರಾಂಶವನ್ನು ಬಳಸಬಹುದಾಗಿರುತ್ತದೆ.

- ಬೆಂಗಳೂರು ನಗರದ ಘನತ್ಯಾಜ್ಯ ನಿರ್ವಹಣೆಯನ್ನು ಸ್ವತಂತ್ರವಾಗಿ ನಿರ್ವಹಿಸಲು, ಒಂದು ಪ್ರತ್ಯೇಕ ಕಂಪನಿಯನ್ನು ಸ್ಥಾಪಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಆ ಕಂಪನಿಯು ಇನ್ನು ಪ್ರಾರಂಭದ ಹಂತದಲ್ಲಿದ್ದು, ಪಾಲಿಕೆಯಿಂದ ಹಣಕಾಸಿನ ನೆರವು ಅಗತ್ಯವಿರುವುದರಿಂದ ಈ ಸಾಲಿನಲ್ಲಿ ರೂ 522 ಕೋಟಿ ಬಂಡವಾಳ ಕಾಮಗಾರಿಗಳನ್ನು ಒಳಗೊಂಡಂತೆ ಒಟ್ಟಾರೆ ರೂ. 1622.33 ಕೋಟಿಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ.
- ಸಾರ್ವಜನಿಕ ಶೌಚಾಲಯಗಳನ್ನು ಓಡಿಎಫ್++ ಮಾನದಂಡಗಳೊಂದಿಗೆ ನಿರ್ವಹಿಸಿ ಮತ್ತು ಹೊಸದಾಗಿ 67 ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಿಸುವ ಗುರಿ ಹೊಂದಿದ್ದೇವೆ.
- ಸಾಮಾಜಿಕ ನ್ಯಾಯದ ರುವಾರಿಯಾಗಿರುವ ಡಾ: ಬಿ.ಆರ್.ಅಂಬೇಡ್ಕರ್‌ರವರ ಜನ್ಮ ದಿನದಂದು ನಮ್ಮ ಪೌರ ಕಾರ್ಮಿಕರು ಹೆಚ್ಚು ಸಂಭ್ರಮದಿಂದ ಆಚರಿಸಲು ಪ್ರತಿ ಪೌರ ಕಾರ್ಮಿಕರಿಗೆ ನೇರ ಪಾವತಿ ಮುಖೇನ ರೂ. 5000 ಗಳನ್ನು ನೀಡಲು ತೀರ್ಮಾನಿಸಲಾಗಿದೆ.
- ಸಾಮಾಜಿಕ ಕಲ್ಯಾಣ ಯೋಜನೆಗಳು ಅನುಷ್ಠಾನಗೊಳಿಸುವಲ್ಲಿ ಹೆಚ್ಚಿನ ಪಾರದರ್ಶಕತೆ ತರಲು ಇನ್ನು ಮುಂದೆ ಘೋಷಿಸಿವ ಯಾವುದೇ ಕಲ್ಯಾಣ ಕಾರ್ಯಕ್ರಮಗಳ ಮತ್ತು ಯೋಜನೆಗಳ ಅರ್ಜಿಗಳನ್ನು ಬೆಂಗಳೂರು ಒನ್ ಕೇಂದ್ರ ಮತ್ತು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.
- ಪಾಲಿಕೆಯ ಶಾಲೆಗಳಿಗೆ ವಿದ್ಯಾರ್ಥಿಗಳನ್ನು ಸೆಳೆಯುವ ಉದ್ದೇಶದಿಂದ ಎಸ್.ಎಸ್.ಎಲ್.ಸಿ ಮತ್ತು ಪಿಯು.ಸಿಯಲ್ಲಿ ಶೇಕಡ:85% ಹೆಚ್ಚು ಅಂಕವನ್ನು ಪಡೆದ ವಿದ್ಯಾರ್ಥಿಗಳಿಗೆ ರೂ:25000.00 ಹಾಗೂ ಶೇಕಡ:60% ವಿದ್ಯಾರ್ಥಿಗಳು ಶೇಕಡ:85% ರಷ್ಟು ಅಂಕ ಪಡೆದ ಶಾಲೆಗಳ ಶಿಕ್ಷಕ ವೃಂದಕ್ಕೆ ರೂ:2.00 ಲಕ್ಷ ಪ್ರೋತ್ಸಾಹ ಧನ ನೀಡಲು ಉದ್ದೇಶಿಸಿದೆ.
- ಕೋವಿಡ್-19ರ ಮಹಾಮಾರಿಯನ್ನು ನಿಯಂತ್ರಿಸಲು ಪಾಲಿಕೆ ಅಧಿಕಾರಿ ಸಿಬ್ಬಂದಿಗಳೂ ಸಾಕಷ್ಟು ಶ್ರಮ ಹಾಕಿ ನಿಯಂತ್ರಣಕ್ಕೆ ತರಲು ಶ್ರಮಿಸಿದ್ದಾರೆ ಅವರಿಗೆ ಧನ್ಯವಾದಗಳನ್ನು ತಿಳಿಸುತ್ತೇನೆ. ಕರ್ನಾಟಕ ಸರ್ಕಾರವು ಸಹ ಈ ಮಹಾಮಾರಿಯನ್ನು ನಿಯಂತ್ರಿಸಲು ರೂ. 337.00 ಕೋಟಿಗಳ ಅಗತ್ಯ ನೆರವನ್ನು ನೀಡಿದೆ.
- ನಗರದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗುತ್ತಿರುವುದಾಗಿ ಅನೇಕ ದೂರುಗಳು ಬರುತ್ತಿದ್ದು, ಇದರ ನಿಯಂತ್ರಣಕ್ಕಾಗಿ ಸುಮಾರು ರೂ:5.00 ಕೋಟಿಗಳ ಅನುದಾವನ್ನು ಮೀಸಲಿಡಲಾಗಿದೆ
- ಪಾಲಿಕೆಯು ಸುಮಾರು 1200ಕ್ಕೂ ಹೆಚ್ಚು ಉದ್ಯಾನವನಗಳನ್ನು ಹೊಂದಿದ್ದು ಇವುಗಳ ನಿರ್ವಹಣೆಯು ವಾರ್ಡ್ ಸಮಿತಿಯ ಮೇಲ್ವಿಚಾರಣೆಯಲ್ಲಿ ನಡೆಸಲಾಗುವುದು. ಉದ್ಯಾನವನಗಳ ನಿರ್ವಹಣೆಯನ್ನು ವಾರ್ಡ್‌ವಾರು ಟೆಂಡರ್

ಮೂಲಕ ನೀಡಲಾಗುವುದು ಮತ್ತು ಪ್ರತಿ ಉದ್ಯಾನವನದ ನಿರ್ವಹಣೆ ಹೊತ್ತಿರುವ ಗುತ್ತಿಗೆದಾರರ ಹೆಸರು ಮತ್ತು ದೂರವಾಣಿ ಸಂಖ್ಯೆಗಳನ್ನು ಪ್ರದರ್ಶಿಸಲಾಗುವುದು.

- ಮನೆಗಳಲ್ಲಿ ಹಾಗೂ ಮನೆಗಳ ಮೇಲ್ಛಾವಣಿಯಲ್ಲಿ ಮನೆಯಲ್ಲೇ ತಯಾರಿಸಿದ ಕಾಂಪೋಸ್ಟ್ ಗೊಬ್ಬರದಿಂದ ತೋಟಗಾರಿಕೆ ಚಟುವಟಿಕೆಗಳನ್ನು ಪ್ರೋತ್ಸಾಹಿಸಲು ಉದ್ದೇಶಿಸಿದ್ದು, ಮನೆಯಲ್ಲೇ ತಯಾರಿಸಿದ ಕಾಂಪೋಸ್ಟ್ ಗೊಬ್ಬರ ಬಳಸಿ ಅತ್ಯುತ್ತಮ ಮೇಲ್ಛಾವಣಿ ಮನೆಯ ಉದ್ಯಾನವನಕ್ಕಾಗಿ ವಲಯ ಮಟ್ಟದಲ್ಲಿ ಸ್ಪರ್ಧೆಯನ್ನು ಏರ್ಪಡಿಸಿ ಪ್ರತಿ ವಲಯಕ್ಕೆ ರೂ. 1.00 ಲಕ್ಷ ಬಹುಮಾನ ನೀಡುವ ಯೋಜನೆಯನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ.
- ಗಾಳಿಯ ಗುಣಮಟ್ಟವು ಜೀವನದ ಗುಣಮಟ್ಟದ ಪ್ರಮುಖ ಸೂಚ್ಯಂಕವಾಗಿದ್ದು, ಅತ್ಯಾಧುನಿಕ ಗಾಳಿ ಗುಣಮಟ್ಟದ ಪರೀಕ್ಷೆಯ ಸಾಧನಗಳು ಮತ್ತು ನಿರ್ವಹಣೆ ಕೇಂದ್ರವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.
- ನಾಗರಿಕರ ಬೇಡಿಕೆಯ ಆಧಾರದ ಮೇಲೆ "ನಾಗರಿಕರಿಗಾಗಿ ಪಾದಚಾರಿ ಮಾರ್ಗ" ಅಭಿಯಾನದ ಅಂಗವಾಗಿ ಪ್ರತಿ ವಾರ್ಡ್ ಸಮಿತಿಗೆ, ರೂ. 20 ಲಕ್ಷಗಳನ್ನು ಪಾದಚಾರಿ ಮಾರ್ಗ ದುರಸ್ತಿಗಾಗಿ ನೀಡಲಾಗುವುದು.
- ಕೆರೆಯ ಪ್ರದೇಶವನ್ನು ರಕ್ಷಿಸುವ ನಿಟ್ಟಿನಲ್ಲಿ ಕೆರೆಯ ಸುತ್ತ ಫೆನ್ಸಿಂಗ್ ಅಳವಡಿಸಲು ರೂ10.00 ಕೋಟಿಗಳ ಅನುದಾನ ಒದಗಿಸಲಾಗಿದೆ.
- 2007 ರಲ್ಲಿ ಪಾಲಿಕೆಗೆ ಸೇರಿದ 110 ಹಳ್ಳಿಗಳಲ್ಲಿ ಬೆಂಗಳೂರು ಜಲಮಂಡಳಿಯಿಂದ ನೀರಿನ ಕೊಳವೆಗಳು ಮತ್ತು ಒಳಚಂಡಿಗೆ ಅಗೆದಿರುವ ರಸ್ತೆಗಳ ದುರಸ್ಥಿಪಡಿಸಲು ರೂ. 1000 ಕೋಟಿಗಳನ್ನು ಮೀಸಲಿಡಲಾಗಿದೆ.
- ಬೆಂಗಳೂರು ನಗರದ ಎಲ್ಲಾ ಬೀದಿ ದೀಪಗಳನ್ನು ಎಲ್.ಇ.ಡಿ ಲೈಟಿಂಗ್ ಅಳವಡಿಸುವ ಯೋಜನಿ ಅಡಿಯಲ್ಲಿ ಮೊದಲನೇ ಹಂತದಲ್ಲಿ ಒಂದು ಲಕ್ಷ ಎಲ್.ಇ.ಡಿ ಬೀದಿ ದೀಪಗಳನ್ನು ಜುಲೈ-2021 ಅಂತ್ಯದಲ್ಲಿ ಪೂರ್ಣಗೊಳಿಸಲಾಗುವುದು.
- ಈ ಆಯವ್ಯಯದಲ್ಲಿ ದೀರ್ಘಕಾಲದಿಂದ ಸ್ಥಗಿತಗೊಂಡಿರುವ ಅನೇಕ ಕಾಮಗಾರಿಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಲು ಆಧ್ಯತೆ ನೀಡಲಾಗಿದ್ದು, ಹೊಸ ಕಾಮಗಾರಿಗಳ ಪ್ರಸ್ತಾವನೆ ಇರುವುದಿಲ್ಲ. ಆದರೂ ಸಹ ಸಾರ್ವಜನಿಕರಿಗೆ ಅನಾನುಕೂಲವಾಗದಂತೆ ಎಚ್ಚರವಹಿಸಿ ನಿರ್ವಹಣಾ ಕಾಮಗಾರಿಗಳಿಗೆ ಅಗತ್ಯ ಅನುದಾನವನ್ನು ಒದಗಿಸಲಾಗಿದೆ.

ಬೆಂಗಳೂರು ನಗರವನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಿ ಅತ್ಯುನ್ನತ ನಗರವನ್ನಾಗಿಸಲು ಸನ್ಮಾನ್ಯ ಮುಖ್ಯ ಮಂತ್ರಿಗಳು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸೇರಿದಂತೆ ನಗರದ ಇತರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಈ ಕೆಳಕಂಡ ವಿವಿಧ ಯೋಜನೆಗಳನ್ನು ರೂಪಿಸಿರುತ್ತಾರೆ.

- ನಗರದ ಸಮಗ್ರ ಸಂಚಾರ ವ್ಯವಸ್ಥೆ ನಿರ್ವಹಣೆಯು ಬೆಂಗಳೂರು ನಗರದ ಪ್ರಮುಖ ಆಧ್ಯತೆಯಾಗಿದ್ದು, 12 ಹೈ-ಡೆನ್ಸಿಟಿ ಕಾರಿಡಾರ್ ಉನ್ನತೀಕರಣ, ಮೆಟ್ರೋ

ಮಾರ್ಗಗಳ ವಿಸ್ತರಣೆ, ಸಬ್-ಅರ್ಬನ್ ರೈಲ್‌ನ್ನು ಕಾರ್ಯಗತಗೊಳಿಸಲು ಯೋಜನೆಗಳನ್ನು ರೂಪಿಸಲಾಗಿದೆ.

- ಧೀರ್ಘ ಕಾಲದಿಂದ ಚಾಲ್ತಿಯಲ್ಲಿರುವ ಯೋಜನೆಗಳಾದ ಸ್ಮಾರ್ಟ್ ಸಿಟಿ ರಸ್ತೆಗಳು, ವೈಟ್ ಟಾಪಿಂಗ್ ಮತ್ತು ಟೆಂಡರ್ ಶ್ಯೂರ್ ಯೋಜನೆಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರ ಬಳಕಗೆ ಒದಗಿಸಲಾಗುವುದು.
- ವಾಹನ ದಟ್ಟಣೆಯನ್ನು ನಿವಾರಿಸಲು ಈಗಾಗಲೇ ಅನುಮೋದನೆಗೊಂಡಿರುವ ಗ್ರೇಡ್ ಸೆಪರೇಟರ್ ಯೋಜನೆಗಳಿಗೆ ವೇಗ ನೀಡಿ ಪೂರ್ಣಗೊಳಿಸಲು ಶ್ರಮ ವಹಿಸಲಾಗುವುದು.
- ಹಸಿರು ಬೆಂಗಳೂರನ್ನು ಸಂರಕ್ಷಿಸುವ ದೃಷ್ಠಿಯಿಂದ ಪಾಲಿಕೆಯ 25 ಕೆರೆಗಳನ್ನು ಪುನಶ್ಚೇನಗೊಳಿಸಲು ಈಗಾಗಲೇ ಕ್ರಮವಹಿಸಲಾಗಿರುತ್ತದೆ.
- ಕೆ.ಆರ್ ಮಾರುಕಟ್ಟೆ ಇಂದ ಬೆಳ್ಳಂದೂರು ಕೆರೆವರೆಗಿನ ಕೆ-100 ರಾಜಕಾಲುವೆಯನ್ನು ನಾಗರೀಕ ಜಲ ಮಾರ್ಗವಾಗಿ ಪರಿವರ್ತನೆ ಮಾಡುವ ಯೋಜನೆಗೆ ಈಗಾಗಲೇ ಸನ್ಮಾನ್ಯ ಮುಖ್ಯ ಮಂತ್ರಿಗಳು ದಿನಾಂಕ:24.03.2021ರಂದು ಶಂಕುಸ್ಥಾಪನೆ ನೆರವೇರಿಸಿರುತ್ತಾರೆ.
- ಮಾಚೋಹಳ್ಳಿ, ಕಾಡುಗೋಡಿಯಲ್ಲಿ ಬೃಹತ್ ವೃಕ್ಷೋದ್ಯಾನಗಳ ನಿರ್ಮಾಣ ಮತ್ತು ಜೆ.ಪಿ. ಪಾರ್ಕ್‌ನ ಅಭಿವೃದ್ಧಿ ಕೈಗೊಳ್ಳಲಾಗಿದ್ದು, ನಗರದ ಹಸಿರ ಸಿರಿಯನ್ನು ಹೆಚ್ಚಿಸಲಾಗುವುದು.
- ನಗರದ ಇತಿಹಾಸ, ಸಂಸ್ಕೃತಿ, ಕಲೆಯನ್ನು ಪ್ರತಿಬಿಂಬಿಸುವ ಹಾಗೂ ಯುವ ಜನತೆಗೆ ಪರಿಚಯ ಮಾಡುವ ದೃಷ್ಠಿಯಿಂದ ಎನ್.ಜಿ.ಇ.ಎಫ್ ಮತ್ತು ಮೈಸೂರು ಲ್ಯಾಂಪ್ ಪ್ರದೇಶದಲ್ಲಿ Experience Bengaluru ಕೇಂದ್ರವನ್ನು ಸ್ಥಾಪಿಸಲಾಗುವುದು.
- ನಾಗರೀಕರ ಸೇವೆಗಳಾದ ಖಾತಾ, ಆಸ್ತಿ ತೆರಿಗೆ, ಜನನ ಮತ್ತು ಮರಣ ಪ್ರಮಾಣ ಪತ್ರ, ಉದ್ಯಮ ಪರವಾನಗಿ, ಕಟ್ಟಡ ನಕ್ಷೆ ಪರವಾನಗಿ ಇತ್ಯಾದಿ ಸೇವೆಗಳು ಆನ್‌ಲೈನ್‌ನಲ್ಲಿ ಸರಳೀಕೃತಗೊಳಿಸಿ, ಏಕೀಕೃತ ಡಿಜಿಟಲ್ ಪೋರ್ಟಲ್ ವ್ಯವಸ್ಥೆ ಕಲ್ಪಿಸಲಾಗವುದು.